# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಡಿ\8068\2015\ಸನಿಕಾಸ–1

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:25/02/2017

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

**ವಿಷಯ:** ದೂರುದಾರರಾದ ಶ್ರೀ.ಹೆಚ್.ಆರ್.ನಾಗಭೂಷಣ ಬಿನ್ ಹೆಚ್.ಎನ್.ರಾಮಯ್ಯ, ಹಂದ್ರಾಳು, ದೊಡ್ಡಹೊಸಹಳ್ಳಿ ಅಂಚೆ, ಪುರವರ ಹೋಬಳಿ, ಮಧುಗಿರಿ ತಾಲ್ಲೂಕ್, ತುಮಕೂರು ಜಿಲ್ಲೆ ರವರ ದೂರನ್ನು ಪರಿಹರಿಸುವ ಬಗ್ಗೆ.

*******

ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕ್ ಪುರವರ ಹೋಬಳಿ ದೊಡ್ಡಹೊಸಹಳ್ಳಿ ಅಂಚೆ ಹಂದ್ರಾಳು ನಿವಾಸಿಯಾದ ಶ್ರೀ.ಹೆಚ್.ಆರ್.ನಾಗಭೂಷಣ ಬಿನ್ ಹೆಚ್.ಎನ್.ರಾಮಯ್ಯ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕ್ 1) ತಹಶೀಲ್ದಾರ್‌ರಾದ ಶ್ರೀ.ರಮೇಶ್, 2) ತಾಲ್ಲೂಕ್ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ.ಮಹಾಲಿಂಗಪ್ಪ ಮತ್ತು 3) ಬ್ಯಾಲ್ಯಾ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀ.ಶಿವರುದ್ರಪ್ಪ (ಇನ್ನು ಮುಂದೆ "1 ರಿಂದ 3ನೇ ಎದುರುದಾರರು" ಎಂದು ಕ್ರಮವಾಗಿ, ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-** ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕ್ ಬ್ಯಾಲ್ಯಾ ಗ್ರಾಮದ ದಲಿತ ಸಮುದಾಯಕ್ಕೆ ಸೇರಿದ ಸ್ಮಶಾಣವನ್ನು ಕೆಲವು ವ್ಯಕ್ತಿಗಳು ಒತ್ತುವರಿ ಮಾಡಿದ್ದು, ಆ ಒತ್ತುವರಿಯನ್ನು ತೆರವುಗೊಳಿಸಿ, ಆ ಸ್ಥಳವನ್ನು ಗುರುತಿಸಿ, ಹದ್ದುಬಸ್ತು ಗುರುತಿಸಿಕೊಡುವಂತೆ ಎದುರುದಾರರಿಗೆ ತಿಳಿಸಿದರೂ ಸಹ, ಎದುರುದಾರರು ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಹೇಳಿದ್ದಾರೆ.

3. ದೂರಿನ ಬಗ್ಗೆ ತನಿಖೆ ಕೈಗೊಂಡು ವರದಿಯನ್ನು ಸಲ್ಲಿಸಲು ತಹಶೀಲ್ದಾರ್, ಮಧುಗಿರಿ ತಾಲ್ಲೂಕ್ (ಇನ್ನು ಮುಂದೆ "ತನಿಖಾಧಿಕಾರಿಗಳು" ಎಂದು ಕರೆಯಲ್ಪಡುತ್ತಾರೆ) ರವರಿಗೆ ಕೇಳಲಾಗಿ, ಸದರಿಯವರು ತಮ್ಮ ವರದಿಯಲ್ಲಿ–

ಹನುಮಂತಪುರ ಗ್ರಾಮದ ಸರ್ವೆ ನಂ.96ರ ಪಹಣಿಯಲ್ಲಿ ದಾಖಲಾದ 1 ಎಕರೆ 25 ಗುಂಟೆ ಜಮೀನನ್ನು ಒತ್ತುವರಿ ಮಾಡಿದ್ದು, ಅದನ್ನು ತೆರವುಗೊಳಿಸಿ ಈಗಾಗಲೇ ವರದಿ ಸಲ್ಲಿಸಲಾಗಿದೆ. ದಿನಾಂಕ:04/11/15ರಂದು ಸಂಬಂಧಿಸಿದ ಭೂ ಮಾಪಕರು ಕಂದಾಯ ಸಿಬ್ಬಂಧಿಯೊಂದಿಗೆ ಸ್ಥಳಕ್ಕೆ ಭೇಟಿ ನೀಡಿ, ಸರ್ವೆ ನಂ.96ರಲ್ಲಿ 1 ಎಕರೆ 25 ಗುಂಟೆ ಜಮೀನನ್ನು ರುದ್ರಭೂಮಿಗೆ ಮಂಜೂರು ಮಾಡಿದ್ದು, ಅಳತೆ ಮಾಡಲಾಗಿದೆ. ಆದರೆ, ಸದರಿ ಸ್ವತ್ತಿನ ಪಕ್ಕದಲ್ಲಿರುವ ಸರ್ವೆ ನಂ.97ರ ಜಮೀನಿನ ಮಾಲೀಕರಾದ ಶ್ರೀಮತಿ.ಟಿ.ಉಮಾದೇವಿ ರವರು 7 ಗುಂಟೆ ಪ್ರದೇಶವನ್ನು ಒತ್ತುವರಿ ಮಾಡಲಾಗಿದೆ. ಈ ಬಗ್ಗೆ ದಿ:05/01/16ರಂದು ತೆರವುಗೊಳಿಸುವಂತೆ ನೋಟೀಸ್ ನೀಡಲಾಗಿದೆ. ಈ ಬಗ್ಗೆ ದಿ:14/01/16ರಂದು ತಾಲ್ಲೂಕ್ ಸರ್ವೆಯರ್, ರಾಜಸ್ವ ನಿರೀಕ್ಷಕರು ಮತ್ತು ಗ್ರಾಮ ಲೆಕ್ಕಿಗರು ಸ್ಥಳಕ್ಕೆ ತೆರಳಿ, ಒತ್ತುವರಿಯಾಗಿರುವ ಪ್ರದೇಶವನ್ನು ತೆರವುಗೊಳಿಸಿ, ಹೇಳಿಕೆಯೊಂದಿಗೆ ಫೋಟೋ ಸಮೇತ ವರದಿ ನೀಡಿದ್ದಾರೆ. ಅಲ್ಲದೇ, ಸದರಿ ಪ್ರದೇಶವನ್ನು ರಕ್ಷಿಸುವ ಉದ್ದೇಶದಿಂದ ಮೂಲಭೂತ ಸೌಕರ್ಯ ಒದಗಿಸುವಂತೆ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬ್ಯಾಲ್ಯಾ ಗ್ರಾಮ ಪಂಚಾಯತ್‌ರವರಿಗೆ ತಿಳಿಸಲಾಗಿದೆಯೆಂದು ಹೇಳಿದ್ದಾರೆ.

4. ವರದಿಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ –

ಗ್ರಾಮ ಲೆಕ್ಕಿಗರು, ರಾಜಸ್ವ ನಿರೀಕ್ಷಕರು, ಸಾರ್ವಜನಿಕರು ಸ್ಥಳ ಪರಿಶೀಲನೆ ಮಾಡಿ, ರುದ್ರಭೂಮಿ ಒತ್ತುವರಿಯಾಗಿರುವುದನ್ನು ತೆರವುಗೊಳಿಸಿರುತ್ತಾರೆಂಬುದು ಸುಳ್ಳಿನಿಂದ ಕೂಡಿದೆ. ದಿ:14/01/16ರಂದು ಸ್ಥಳ ಪರಿಶೀಲನೆ ಮಾಡಿ, ಸರ್ವೆ ಮಾಡಿದ್ದು, ಅದು ಕಾನೂನುಬಾಹಿರವಾಗಿದೆ. ಸರ್ವೆ ಮಾಡುವ ಸಂದರ್ಭದಲ್ಲಿ ಯಾವುದೇ ಸಾರ್ವಜನಿಕರ ಸಹಿ ಪಡೆದಿಲ್ಲ, ಸದರಿ ಸ್ವತ್ತನ್ನು ಒತ್ತುವರಿ ಮಾಡಿದ, ಶ್ರೀಮತಿ.ಉಮಾದೇವಿ ಕೋಂ ನಾಗರಾಜು ರವರ ತಂದೆ ಸರ್ವೆ ಇಲಾಖೆಯಲ್ಲಿದ್ದ ಕಾರಣ, ಸರಿಯಾದ ರೀತಿ ಅಳತೆ ಮಾಡದೇ ವರದಿ ನೀಡಿದ್ದಾರೆ. ಸದರಿ ಸ್ಮಶಾಣಕ್ಕೆ ಸಂಬಂಧಪಟ್ಟಂತೆ, ಯಾವುದೇ ಸಾರ್ವಜನಿಕ ರಸ್ತೆ ಸಂಪರ್ಕವನ್ನು ಸಹ ಕಲ್ಪಿಸಿಲ್ಲವೆಂದು ಹೇಳಿದ್ದಾರೆ.

5. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:-

ಹನುಮಂತಪುರ ಗ್ರಾಮದ ಸರ್ವೆ ನಂ.96ರ ಪಹಣಿಯಲ್ಲಿ ದಾಖಲಾದ 1 ಎಕರೆ 25 ಗುಂಟೆ ಜಮೀನಿನಲ್ಲಿ ಶ್ರೀಮತಿ.ಟಿ.ಉಮಾದೇವಿ ಎಂಬುವವರು 7 ಗುಂಟೆ ಜಮೀನನ್ನು ಒತ್ತುವರಿ ಮಾಡಿದ್ದು, ಸದರಿ 7 ಗುಂಟೆ ಜಮೀನನ್ನು ರಾಜಸ್ವ ನಿರೀಕ್ಷಕರು, ತಹಶೀಲ್ದಾರ್, ಮಧುಗಿರಿ, ಗ್ರಾಮ ಲೆಕ್ಕಾಧಿಕಾರಿ ಹಾಗೂ ಸಾರ್ವಜನಿಕರ ಸಮಕ್ಷಮ ತೆರವುಗೊಳಿಸಿ ಈ ಬಗ್ಗೆ ಒತ್ತುವರಿದಾರರಾದ ಶ್ರೀಮತಿ.ಟಿ.ಉಮಾದೇವಿ ರವರು ಸಹ ಸದರಿ ಸ್ವತ್ತನ್ನು ಬಿಟ್ಟುಕೊಟ್ಟಿರುವ ಬಗ್ಗೆ ಹೇಳಿಕೆ ನೀಡಿದ್ದಾರೆ. ಸದರಿ ರುದ್ರಭೂಮಿಯನ್ನು ಒತ್ತುವರಿ ಮಾಡಿರುವ ಪ್ರದೇಶವನ್ನು ತೆರವುಗೊಳಿಸಿರುವುದು ಕಂಡು ಬಂದಿದೆ. ಆದರೆ, ಸದರಿ ರುದ್ರಭೂಮಿಗೆ ಮೂಲಭೂತ ಸೌಕರ್ಯ ಕಲ್ಪಿಸಿರುವುದಿಲ್ಲ.

6. ಆದ್ದರಿಂದ, ಸದರಿ ರುದ್ರಭೂಮಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಬಗ್ಗೆ ಮತ್ತು ಒತ್ತುವರಿದಾರರ ವಿರುದ್ಧ ಕ್ರಿಮಿನಲ್ ಪ್ರಕರಣವನ್ನು ಸಂಬಂಧಿಸಿದ ಪೊಲೀಸ್ ಠಾಣೆಯಲ್ಲಿ ದಾಖಲಿಸಿ ಸೂಕ್ತ ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(1)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ.

7. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ **ಮೂರು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

Sd/- 27/2/17

**(ನ್ಯಾಯಾಮೂರ್ತಿ ಸುಬಾಷ್ ಬಿ ಅಡಿ)**
**ಉಪಲೋಕಾಯುಕ್ತ-2,**
**ಕರ್ನಾಟಕ ರಾಜ್ಯ.**